ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	319
ಸದಸ್ಯರ ಹೆಸರು	:	ಡಾ. ಚಂದ್ರಶೇಖರ ಬಿ. ಪಾಟೀಲ್ (ಪದವೀಧರರ ಕ್ಷೇತ್ರ)
ಉತ್ತರಿಸುವ ದಿನಾಂಕ	:	03.02.2021
ಉತ್ತರಿಸುವ ಸಚಿವರು	:	ಕಂದಾಯ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
(ಅ)	ಕಂದಾಯ ಇಲಾಖೆಯಲ್ಲಿ ಎಷ್ಟು ಜನ ಗ್ರಾಮ ಸಹಾಯಕರು ಕಾರ್ಯನಿರ್ವಹಿಸುತ್ತಿದ್ದಾರೆ; ಅವರೆಲ್ಲರೂ ಖಾಯಂ ಗೊಂಡಿದ್ದಾರೆಯೇ;	ಕಂದಾಯ ಇಲಾಖೆಯಲ್ಲಿ ಒಟ್ಟು- 9782 ಗ್ರಾಮ ಸಹಾಯಕರುಗಳು ಮಿತ ವೇತನದ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿದ್ದಾರೆ. ಸದರಿಯವರು ಖಾಯಂಗೊಂಡಿರುವುದಿಲ್ಲ.
(ಆ)	ಕಂದಾಯ ಗ್ರಾಮ ಸಹಾಯಕರ ಖಾಯಂಮಾತಿಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ?	ಗ್ರಾಮ ಸಹಾಯಕರು ಮಿತ ವೇತನದ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿದ್ದು ಸದರಿಯವರಿಗೆ ಮಾಸಿಕ ಮಿತವೇತನವನ್ನು ಕಾಲಕಾಲಕ್ಕೆ ಹೆಚ್ಚಳ ಮಾಡಲಾಗಿದೆ. ಸರ್ಕಾರದ ಆದೇಶ ಸಂಖ್ಯೆ: ಕಂಇ 83 ಬಿಎಸ್ಐ 2011, ದಿನಾಂಕ:26.3.2018ರಲ್ಲಿ ದಿನಾಂಕ:1.4.2018ರಿಂದ ಅನ್ವಯವಾಗುವಂತೆ ಮಾಸಿಕ ಮಿತವೇತನವನ್ನು ರೂ.10,000/- ದಿಂದ ರೂ.12,000/-ಗಳಿಗೆ ಹೆಚ್ಚಿಸಿ ಆದೇಶಿಸಲಾಗಿದೆ. ಮಾನ್ಯ ಸರ್ವೋಚ್ಛ ನ್ಯಾಯಾಲಯವು ಸಿವಿಲ್ ಅಪೀಲು ಸಂಖ್ಯೆ:4559-4562/1998ರಲ್ಲಿ ದಿನಾಂಕ: 06.11.2003 ರಂದು ನೀಡಿರುವ ತೀರ್ಪಿನ ಅನುಸಾರ ಗ್ರಾಮ ಸಹಾಯಕರ ಸೇವೆಯನ್ನು ಸಕ್ರಮೀಕರಿಸಲು ನಿಯಮಾನುಸಾರ ಅವಕಾಶವಿರುವುದಿಲ್ಲ.

ಸಂಖ್ಯೆ: ಕಂಇ 22 ಬಿಎಸ್ಐ 2021

(ಆರ್. ಅಶೋಕ)

ಕಂದಾಯ ಸಚಿವರು